# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1394 (1507) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 17.03.2026 |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಪ್ರಸ್ತುತ ಆರ್ಥಿಕ ವರ್ಷದಲ್ಲಿ ವಿವಿಧ ಬಗೆಯ ಹಲವಾರು ಉತ್ಪನ್ನಗಳ ತಯಾರಿಕೆಯಲ್ಲಿ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳಲು ಸಾಧ್ಯತೆಗಳ ಕುರಿತು ಸಂಶೋಧನೆಗೆ ಹಾಗೂ ಅಡಿಕೆ ಉತ್ಪನ್ನಗಳ ಮೌಲ್ಯ-ವರ್ಧನೆಗೆ ಉತ್ತೇಜನ ನೀಡುವುದಕ್ಕೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು;</td><td>
ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ (ಕೆ.ಸಿ.ಟಿ.ಯು) ಸಂಸ್ಥೆ ವತಿಯಿಂದ 2026-27ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಎಂ.ಎಸ್.ಇ-ಸಿಡಿಪಿ ಯೋಜನೆಯಡಿ ಅಡಕೆ ಮೌಲ್ಯವರ್ಧನೆ ಕ್ಲಸ್ಟರ್ ಸ್ಥಾಪನೆಗಾಗಿ ಶಿವಮೊಗ್ಗ ಜಿಲ್ಲೆಯಲ್ಲಿ ಒಂದು ಕ್ಲಸ್ಟರನ್ನು ಗುರುತಿಸಲಾಗಿದ್ದು, ಪ್ರಸಕ್ತ ವರ್ಷದಲ್ಲಿ ಅಡಿಕೆ ಕ್ಲಸ್ಟರ್ ಸ್ಥಾಪನೆಗಾಗಿ ಕ್ರಮ ಕೈಗೊಳ್ಳಲಾಗುತ್ತದೆ.
ಮುಂದುವರೆದು, ರಾಜ್ಯದಲ್ಲಿ ಅಡಿಕೆ ಉತ್ಪನ್ನಗಳ ತಯಾರಿಕೆ ಕೈಗಾರಿಕೆಗಳನ್ನು ಸ್ಥಾಪಿಸಲು ಕೈಗಾರಿಕಾ ನೀತಿ 2025-30 ನ್ನು ಹೊರತರಲಾಗಿದೆ.
ಕೈಗಾರಿಕೆಗಳನ್ನು ಉತ್ತೇಜಿಸಲು ಈ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಅರ್ಹ MSME ಘಟಕಗಳಿಗೆ ಕಲ್ಪಿಸಲಾಗುತ್ತಿದೆ:
<table>
<tr><th>ಕ್ರ.ಸಂ</th><th>ಎಂ.ಎಸ್.ಎಂ.ಇ.</th></tr>
<tr><td>1</td><td>ಬಂಡವಾಳ ಹೂಡಿಕೆ ಸಹಾಯಧನ</td></tr>
<tr><td>2</td><td>ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ರಿಯಾಯಿತಿ</td></tr>
<tr><td>3</td><td>ಭೂಪರಿವರ್ತನಾ ಶುಲ್ಕ ಮರುಪಾವತಿ.</td></tr>
<tr><td>4</td><td>ಗುಣಮಟ್ಟದ ಪ್ರಮಾಣಿತ ಬೆಂಬಲ</td></tr>
<tr><td>5</td><td>ರಫ್ತು ಸಿದ್ಧತೆಗಾಗಿ ಪ್ರಮಾಣೀಕರಣ ಬೆಂಬಲ</td></tr>
<tr><td>6</td><td>ಎಂ.ಎಸ್.ಎಂ.ಇ. ಗಳ ವಾಣಿಜ್ಯ ತಯಾರಿಕೆ ಬಳಕೆ ಭೂಪರಿವರ್ತನಾ ಶುಲ್ಕ ಮರುಪಾವತಿ</td></tr>
<tr><td>7</td><td>ಎಂ.ಎಸ್.ಎಂ.ಇ. ಗಳಿಗೆ ವಿದ್ಯುತ್ ದರ ಪಟ್ಟಿಯ ಮೇಲಿನ ತೆರಿಗೆಯಿಂದ ವಿನಾಯಿತಿ</td></tr>
<tr><td>8</td><td>ಅತೀ ಸಣ್ಣ ಮತ್ತು ಸಣ್ಣ ಕೈಗಾರಿಕೆಗಳಿಗೆ ಪವರ್ ಸಬ್ಸಿಡಿ ಮರುಪಾವತಿ.</td></tr>
<tr><td>9</td><td>ಇ.ಟಿ.ಪಿ. ಸಬ್ಸಿಡಿ.</td></tr>
</table>
</td></tr>
<tr><td>ಆ</td><td>ಪ್ರಸ್ತುತ ಆರ್ಥಿಕ ವರ್ಷದಲ್ಲಿ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳುವ ಸಾಧ್ಯತೆಗಳ ಕುರಿತು ಸಂಶೋಧನೆಗೆ ಹಾಗೂ ಅಡಿಕೆ</td><td>ಕೆ.ಸಿ.ಟಿ.ಯು ಸಂಸ್ಥೆಯ ವತಿಯಿಂದ ಶಿವಮೊಗ್ಗ ಜಿಲ್ಲೆಯಲ್ಲಿ ಒಂದು ಅಡಿಕೆ ಕ್ಲಸ್ಟರನ್ನು ಗುರುತಿಸಲಾಗಿರುತ್ತದೆ. ಆದರೆ ಇಲ್ಲಿಯವರೆಗೆ ಯಾವುದೇ ಅನುದಾನ ವಿನಿಯೋಗಿಸಿರುವುದಿಲ್ಲ.</td></tr>
</table>

| | | |
|---|---|---|
| | ಉತ್ಪನ್ನಗಳ ಮೌಲ್ಯ ವರ್ಧನೆಗೆ ಉತ್ತೇಜನ ನೀಡುವ ಕಾರ್ಯಕ್ರಮ ಮತ್ತು ಯೋಜನೆಗಳಿಗೆ ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಸಾಮಾನ್ಯ ಸೌಲಭ್ಯ ಕೇಂದ್ರಗಳ (ಸಿ.ಎಫ್.ಸಿ.) ರಚನೆಗೆ ಬೆಂಬಲಿಸುವ ನಿಟ್ಟಿನಲ್ಲಿ MSME ಘಟಕಗಳಿಗೆ ಸ್ವಂತವಾಗಿ ಭರಿಸಲು ಆಗದ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಘಟಕಗಳು ತಮ್ಮ ಉತ್ಪಾದನಾ ಗುಣಮಟ್ಟವನ್ನು ಸುಧಾರಿಸಲು, ದಕ್ಷತೆಯನ್ನು ಹೆಚ್ಚಿಸಲು ಮತ್ತು ಸ್ಪರ್ಧಾತ್ಮಕವಾಗಿರಲು ಈ ಸೌಲಭ್ಯವು ಸಹಾಯ ಮಾಡುತ್ತವೆ. |
| ಇ | ವಿವಿಧ ಬಗೆಯ ಔಷಧ, ಸಾಬೂನು, ಬಣ್ಣ, ಸಿರಾಫ್ ಹಾಗೂ ಇತರ ಹಲವಾರು ಉತ್ಪನ್ನಗಳ ತಯಾರಿಕೆಯಲ್ಲಿ ಕೂಡ ಅಡಿಕೆ ಉತ್ಪನ್ನಗಳನ್ನು ವ್ಯಾಪಕವಾಗಿ ಬಳಸಿಕೊಳ್ಳುವ ವಿಪುಲ ಸಾಧ್ಯತೆಗಳಿದ್ದು, ಅದಕ್ಕೆ ಸಂಬಂಧಿಸಿದಂತೆ ಅಡಿಕೆಯ ಔಷಧೀಯ ಮತ್ತು ಉತ್ತಮ ಗುಣಗಳನ್ನು ದಾಖಲೆಯ ಆಧಾರದಲ್ಲಿ ತಿಳಿಸಲು ವ್ಯಾಪಕ ಸಂಶೋಧನೆ ಕೈಗೊಳ್ಳಲು ತ್ವರಿತವಾಗಿ ಅಗತ್ಯ ಕ್ರಮ ವಹಿಸಲು ಸರ್ಕಾರ ಈ ಕೂಡಲೇ ಕ್ರಮ ಕೈಗೊಳ್ಳುವುದೇ? | ಮುಂದುವರೆದು, ಸಂಶೋಧನೆ ಮತ್ತು ಅಭಿವೃದ್ಧಿ ಸಂಬಂಧದಲ್ಲಿ ಸಿ.ಎಫ್.ಸಿ. ಗಳು ಆರ್ & ಡಿ ಚಟುವಟಿಕೆಗಳ ಕೇಂದ್ರಗಳಾಗಿ ಕಾರ್ಯನಿರ್ವಹಿಸಬಹುದಾಗಿರುತ್ತದೆ. ಉದ್ದಿಮೆಗಳಿಗೆ ಹೊಸ ಉತ್ಪನ್ನಗಳು ಮತ್ತು ಪ್ರಕ್ರಿಯೆಗಳನ್ನು ಅಭಿವೃದ್ಧಿಪಡಿಸಲು ಅನುವು ಮಾಡಿಕೊಡುತ್ತದೆ. ಈ ಸಹಯೋಗದ ವಾತಾವರಣವು ನಾವೀನ್ಯತೆ ಮತ್ತು ತಾಂತ್ರಿಕ ಪ್ರಗತಿಯನ್ನು ಉತ್ತೇಜಿಸುತ್ತದೆ. |

**ಸಿಐ 58 ಎಸ್‌ಪಿಐ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು